# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/147/16-17

ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 17-04-2017.

## ಸುತ್ತೋಲೆ

ವಿಷಯ: ಪಾಲಿಕೆಯ ಅಧಿಕಾರಿ / ನೌಕರರುಗಳು ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಗಳನ್ನು ನಿಯಮಿತ ಅವಧಿಯಲ್ಲಿ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 23(1) ರನ್ವಯ ಪ್ರತಿಯೊಬ್ಬ ಸರ್ಕಾರಿ ನೌಕರರು ಸರ್ಕಾರಿ ಸೇವೆಗೆ ನೇಮಕವಾದಾಗ ಮತ್ತು ಆ ತರುವಾಯ ಮಾರ್ಚ್ 31ಕ್ಕೆ ಅಂತ್ಯಗೊಳ್ಳುವ ಆರ್ಥಿಕ ವರ್ಷದಲ್ಲಿ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಯನ್ನು ನಿಗಧಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದಾಗಿರುತ್ತದೆ.

ಆದರೆ, ಪಾಲಿಕೆಯ ಕೆಲವು ಖಾಯಂ ಅಧಿಕಾರಿ / ನೌಕರರುಗಳು ತಮ್ಮ ಹಾಗೂ ತಮ್ಮ ಕುಟುಂಬದ ಸದಸ್ಯರ ಆಸ್ತಿ ಮತ್ತು ಹೊಣೆಗಾರಿಕೆಯ ವಿವರ ಪಟ್ಟಿಯನ್ನು ಸಂಬಂಧಪಟ್ಟ ಪ್ರಾಧಿಕಾರಕ್ಕೆ ನಿಗಧಿತ ಅವಧಿಯಲ್ಲಿ ಸಲ್ಲಿಸದೇ ಇರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಗ್ರೂಪ್ 'ಎ', ಮತ್ತು 'ಬಿ' ವೃಂದದ ಅಧಿಕಾರಿಗಳ ಆಸ್ತಿ ಮತ್ತು ಋಣಭಾರ ಪ್ರಪತ್ರಗಳನ್ನು ಆಯುಕ್ತರು ರವರ ಆಡಳಿತ ಶಾಖೆಗೆ, ಹಾಗೂ ಗ್ರೂಪ್ 'ಸಿ' ಮತ್ತು 'ಡಿ' ವೃಂದದ ಸಿಬ್ಬಂಧಿಗಳು ಆಸ್ತಿ ಮತ್ತು ಋಣಭಾರ ಪ್ರಪತ್ರಗಳನ್ನು ತಮ್ಮ ಬಟವಾಡೆ ಅಧಿಕಾರಿಗಳಿಗೆ ಸಲ್ಲಿಸಲು ಸೂಚಿಸಿದೆ. ಆಡಳಿತ ಶಾಖೆಯ ವಿಷಯ ನಿರ್ವಾಹಕರುಗಳು ತಮ್ಮ ವಿಭಾಗಗಳಿಗೆ ಸಂಬಂಧಿಸಿದ ಗ್ರೂಪ್ 'ಎ', ಮತ್ತು 'ಬಿ' ವೃಂದದ ಅಧಿಕಾರಿಗಳ ಆಸ್ತಿ ಮತ್ತು ಋಣಭಾರ ಪ್ರಪತ್ರಗಳನ್ನು ಸ್ವೀಕರಿಸಿ ಸಮುಚಿತ ಮಾರ್ಗದಲ್ಲಿ ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಮಂಡಿಸಲು ಸೂಚಿಸಿದೆ.

ಮೇಲ್ಕಂಡಂತೆ, ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸ್ವೀಕರಿಸಲು ಸೂಚಿಸಲಾದ ಪ್ರಾಧಿಕಾರಕ್ಕೆ ಪಾಲಿಕೆಯ ಎಲ್ಲಾ ವೃಂದದ ಖಾಯಂ ಅಧಿಕಾರಿ / ನೌಕರರುಗಳು (ಗ್ರೂಪ್-ಡಿ ನೌಕರರುಗಳಾದ ನಾಲ್ಕನೇ ದರ್ಜೆ ನೌಕರರು, ಪೌರ ಕಾರ್ಮಿಕರು, ಗ್ಯಾಂಗ್‌ಮೆನ್, ತೋಟಗಾರಿಕೆ ಮಾಲಿ ಮತ್ತು ಇತರರು ಒಳಗೊಂಡಂತೆ) **ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳ ಪಟ್ಟಿಯನ್ನು ಕಡ್ಡಾಯವಾಗಿ ಮಾರ್ಚ್ 31ರ ಅಂತ್ಯಕ್ಕೆ ಇರುವಂತೆ ನಿಗಧಿತ ನಮೂನೆಯಲ್ಲಿ ಏಪ್ರಿಲ್ 15ನೇ ದಿನಾಂಕದೊಳಗಾಗಿ ಸಲ್ಲಿಸತಕ್ಕದ್ದು.**

ಇಲ್ಲದಿದ್ದಲ್ಲಿ ಕರ್ನಾಟಕ ಸರ್ಕಾರಿ ಸೇವಾ ನಿಯಮಗಳು (ಸಿ.ಸಿ. ಮತ್ತು ಎ) ನಿಯಮಗಳು – 1957ರ ಅಡಿಯಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಮ.ತಿ.ನೋ.,

ಪ್ರತಿಯನ್ನು : ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ವಿಶೇಷ ಆಯುಕ್ತರು (ಯೋಜನೆ)/(ಹಣಕಾಸು)/(ಕಲ್ಯಾಣ)/(ಜಾಹೀರಾತು)/(ಆಸ್ತಿಗಳು) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಎಲ್ಲಾ ವಲಯ ಅಪರ/ಜಂಟಿ ಆಯುಕ್ತರವರಿಗೆ ಮಾಹಿತಿಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಪಾಲಿಕೆಯ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರು, ಮಾನ್ಯ ವಿರೋಧ ಪಕ್ಷದ ನಾಯಕರು, ಮಾನ್ಯ ಆಡಳಿತ ಪಕ್ಷದ ನಾಯಕರು ರವರುಗಳ ಅವಗಾಹನೆಗೆ ತರಲು ಕೋರಿದೆ.

: ಎಲ್ಲಾ ವಲಯ ಇಲಾಖಾ ಮುಖ್ಯಸ್ಥರುಗಳಿಗೆ / ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗೆ ಕಳುಹಿಸಿದೆ.

: ಕಛೇರಿ ಪ್ರತಿ.